**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಹೇಮಲತಾ ನಾಯಕ ಇವರು ನಿಯಮ-330 ರಡಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:**

*********

**ಪ್ರಶ್ನೆ:**

ಕಲ್ಯಾಣ ಕರ್ನಾಟಕದ ಕೊಪ್ಪಳ, ಹೊಸಪೇಟೆ, ಬಳ್ಳಾರಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಅಕ್ರಮವಾಗಿ ಮರಳು ಸಾಗಾಣಿಕೆ ಹಾಗೂ ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿದ್ದು, ವರ್ಷದಿಂದ ವರ್ಷಕ್ಕೆ ಇಂತಹ ಅಕ್ರಮ ಚಟುವಟಿಕೆಗಳು ಹೆಚ್ಚಾಗುತ್ತಿರುವುದರಿಂದ ನದಿಗಳು, ಹಳ್ಳಗಳು, ಕೆರೆಗಳು, ಸೇರಿದಂತೆ ನೈಸರ್ಗಿಕ ಜಲಮೂಲಗಳ ನಾಶ ಹಾಗೂ ಪರಿಸರದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ. ಪ್ರಕೃತಿ ಮತ್ತು ಜಲಮೂಲಗಳ ಸಂರಕ್ಷಣೆ ಸರ್ಕಾರದ ಹಾಗೂ ಸಮಾಜದ ಜವಾಬ್ದಾರಿಯಾಗಿದ್ದರೂ, ಅಕ್ರಮ ಮರಳು ಸಾಗಾಣಿಕೆ ಮತ್ತು ಗಣಿಗಾರಿಕೆಯನ್ನು ತಡೆಗಟ್ಟುವಲ್ಲಿ ಪೋಲಿಸ್ ಇಲಾಖೆ, ಭೂವಿಜ್ಞಾನ ಮತ್ತು ಗಣಿಗಾರಿಕೆ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ವಿಫಲವಾಗಿರುವುದರಿಂದ ಸರ್ಕಾರದ ರಾಜಸ್ವಕ್ಕೆ ಹಾಗೂ ಸಾರ್ವಜನಿಕ ಆಸ್ತಿಗೆ ಅಪಾರ ನಷ್ಟ ಉಂಟಾಗುತ್ತಿದೆ. ಆದ್ದರಿಂದ ಈ ಗಂಭೀರ ಸಾರ್ವಜನಿಕ ಹಿತದ ವಿಷಯವನ್ನು ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2023 ರ 31-U ರಂತೆ IV, V ಮತ್ತು ಉನ್ನತ ಶ್ರೇಣಿಗಳ ಹೊಳೆ / ನದಿಗಳ ಪಾತ್ರಗಳಲ್ಲಿ ಒಟ್ಟು 127 ಮರಳು ಬ್ಲಾಕ್ ಗಳನ್ನು ಗುರುತಿಸಲಾಗಿದೆ. ಈ ಪೈಕಿ 12 ಮರಳು ಬ್ಲಾಕ್ ಗಳನ್ನು ಸರ್ಕಾರಿ ಕಾಮಗಾರಿಗಳಿಗೆ ಮೀಸಲಿರಿಸಲಾಗಿದೆ. ಗುರುತಿಸಲಾಗಿರುವ 127 ಮರಳು ಬ್ಲಾಕ್ ಗಳ ಪೈಕಿ ಪ್ರಸ್ತುತ 108 ಮರಳು ಬ್ಲಾಕ್ ಗಳನ್ನು ಇ-ಟೆಂಡರ್ ಪ್ರಕ್ರಿಯೆಗೆ ಒಳಪಡಿಸಲಾಗಿದ್ದು, 88 ಮರಳು ಬ್ಲಾಕ್ ಗಳ ಹರಾಜು ಪ್ರಕ್ರಿಯೆ ಯಶಸ್ವಿಯಾಗಿದ್ದು ಪ್ರಸ್ತುತ ಪರಿಸರ ವಿಮೋಚನಾ ಪತ್ರ ಪಡೆಯುವ ಹಂತದಲ್ಲಿವೆ. ಬೀದರ್ ಜಿಲ್ಲೆಯಲ್ಲಿ ಯಾವುದೇ ಮರಳು ನಿಕ್ಷೇಪಗಳು ಇಲ್ಲದೇ ಇರುವುದರಿಂದ ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ.

ಕಲ್ಯಾಣ ಕರ್ನಾಟಕದ ಜಿಲ್ಲೆಗಳಾದ ರಾಯಚೂರು, ಕೊಪ್ಪಳ ಮತ್ತು ವಿಜಯನಗರಗಳಲ್ಲಿ ಹೊಸ ಮರಳು ನೀತಿ-2020 ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2021 ರಂತೆ ಸ್ಥಳೀಯ ಕಾಮಗಾರಿಗಳಿಗೆ I, II ಮತ್ತು IIIನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಲಭ್ಯವಿರುವ ಮರಳು ನಿಕ್ಷೇಪ ಪ್ರದೇಶಗಳಲ್ಲಿ ದೊರೆಯುವ ಮರಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಮೂಲಕ ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಒಟ್ಟು 40 ಮರಳು ಬ್ಲಾಕ್ ಗಳನ್ನು ಗುರುತಿಸಿ ಈ ಪೈಕಿ 8 ಮರಳು ಬ್ಲಾಕ್ ಗಳಲ್ಲಿ ಸ್ಥಳೀಯ ಕಾಮಗಾರಿಗಳಿಗೆ ಮರಳು ಪೂರೈಸಲಾಗುತ್ತಿದೆ.

ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2021 ರ 31-Z ರಂತೆ ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಒಟ್ಟು 50 ಪಟ್ಟಾ ಜಮೀನುಗಳಲ್ಲಿ 416.86 ಎಕರೆ ವಿಸ್ತೀರ್ಣ ಪ್ರದೇಶಕ್ಕೆ ಮರಳು ಗಣಿಗಾರಿಕೆಗೆ ಪರವಾನಿಗೆಯನ್ನು ಸರ್ಕಾರದಿಂದ ನೀಡಲಾಗಿದೆ.

ಮರಳು ನೀತಿ-2020 ರಂತೆ IV, V ಮತ್ತು ಉನ್ನತ ಶ್ರೇಣಿಗಳ ಹೊಳೆ / ನದಿಗಳ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಸರ್ಕಾರಿ ಸ್ವಾಮ್ಯದ ಹಟ್ಟಿ ಚಿನ್ನದ ಕಂಪನಿ ಇವರಿಗೆ 34 ಮರಳು ಬ್ಲಾಕ್ ಗಳನ್ನು ಗುರುತಿಸಿ /ಅಧಿಸೂಚನೆ ಹೊರಡಿಸಲಾಗಿತ್ತು ಅದರಂತೆ, ಪ್ರಸ್ತುತ 11 ಮರಳು ಬ್ಲಾಕ್ ಗಳಿಂದ (ಏಪ್ರಿಲ್ -2026 ರಿಂದ ಜುಲೈ-2026 ರ ಅಂತ್ಯಕ್ಕೆ) ಅಂದಾಜು 27,818 ಮೆ.ಟನ್ ಮರಳು ಗಣಿಗಾರಿಕೆ ನಡೆಸಿ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗಿದೆ.

ಮರಳು ಗಣಿಗಾರಿಕೆ ಚಟುವಟಿಕೆಯನ್ನು ನಿಯಂತ್ರಿಸಲು ರಾಜ್ಯದ ಜಿಲ್ಲೆಗಳಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲೂಕುಗಳಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ. ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿಯಲ್ಲಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು-1994 ರ ನಿಯಮ 31-Rರ ಉಪ ನಿಯಮ 12 ರಡಿಯಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯೋಜಿಸಲಾಗಿರುತ್ತದೆ. ಅದರಂತೆ ರಾಜ್ಯದಲ್ಲಿ ಆಯಾ ಜಿಲ್ಲಾ ಮತ್ತು ತಾಲ್ಲೂಕು ಮರಳು ಸಮಿತಿಯ ಸದಸ್ಯ ಇಲಾಖೆಗಳಿಂದ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.

ಮುಂದುವರೆದು, ಅನಧಿಕೃತ ಮರಳು ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಮರಳು ಸಮಿತಿಯಿಂದ ಚಾಲಿತ ದಳದ ತಂಡಗಳನ್ನು ರಚಿಸಿಕೊಂಡು ಮತ್ತು ಆಯಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಅನಧಿಕೃತ ಮರಳು ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.

ಮರಳು ಸೇರಿದಂತೆ ಇತರೆ ಎಲ್ಲಾ ಖನಿಜಗಳ ಅನಧಿಕೃತ ಖನಿಜ ಸಾಗಾಣಿಕೆಯನ್ನು ನಿಯಂತ್ರಿಸಲು One State One GPS **ವ್ಯವಸ್ಥೆಯನ್ನು** ಜಾರಿಗೆ ತಂದಿದ್ದು, ಖನಿಜ ಸಾಗಾಣಿಕಾ ವಾಹನಗಳು GPS ಅಳವಡಿಸಿಕೊಂಡು ಖನಿಜ ಸಾಗಾಣಿಕೆ ಪರವಾನಿಗೆಯೊಂದಿಗೆ ಸಾಗಾಣಿಕೆ ಮಾಡುವುದನ್ನು ಕಡ್ಡಾಯಗೊಳಿಸಿದೆ.

ಮೇಲ್ಕಂಡಂತೆ ಕಲ್ಯಾಣ ಕರ್ನಾಟಕದ ಜಿಲ್ಲೆ ಹಾಗೂ ತಾಲ್ಲೂಕು ಮರಳು ಸಮಿತಿಗಳಿಂದ ಅನಧಿಕೃತ ಮರಳು ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದ್ದು, ಕಳೆದ 3 ವರ್ಷಗಳಲ್ಲಿ (2024-25 2025-26 ಮತ್ತು 2026-27 ಜುಲೈ ಅಂತ್ಯದವರೆಗೆ) ಅನಧಿಕೃತ ಮರಳು ಗಣಿಗಾರಿಕೆ, ಸಾಗಾಣಿಕೆ ಹಾಗೂ ದಾಸ್ತಾನುರಡಿ ಒಟ್ಟು 4001 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿರುತ್ತದೆ. ಈ ಪೈಕಿ 1913 ಪ್ರಕರಣಗಳಿಗೆ ಸಂಬಂಧಪಟ್ಟಂತೆ ನ್ಯಾಯಾಲಯ ಹಾಗೂ ಪೋಲಿಸ್ ಠಾಣೆಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ. ಉಳಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ರೂ.848.6 ಲಕ್ಷಗಳ ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದೆ.

ಕರ್ನಾಟಕ ರಾಜ್ಯದ ಇತರೆ ಜಿಲ್ಲೆಗಳಲ್ಲಿಯೂ ಸಹ IV, V ಮತ್ತು ಉನ್ನತ ಶ್ರೇಣಿಗಳ ಹೊಳೆ / ನದಿಗಳ ಪಾತ್ರಗಳಲ್ಲಿ ಒಟ್ಟು 227 ಮರಳು ಬ್ಲಾಕ್ ಗಳನ್ನು ಗುರುತಿಸಲಾಗಿರುತ್ತದೆ. ಈ ಪೈಕಿ 36 ಮರಳು ಬ್ಲಾಕ್ ಗಳನ್ನು ಸರ್ಕಾರಿ ಕಾಮಗಾರಿಗಳಿಗೆ ಮೀಸಲಿರಿಸಲಾಗಿರುತ್ತದೆ. ಗುರುತಿಸಲಾಗಿರುವ 227 ಮರಳು ಬ್ಲಾಕ್ ಗಳ ಪೈಕಿ ಪ್ರಸ್ತುತ 172 ಮರಳು ಬ್ಲಾಕ್ ಗಳನ್ನು ಇ-ಟೆಂಡರ್ ಪ್ರಕ್ರಿಯೆಗೆ ಒಳಪಡಿಸಲಾಗಿದ್ದು, 131 ಮರಳು ಬ್ಲಾಕ್ ಗಳ ಹರಾಜು ಪ್ರಕ್ರಿಯೆ ಯಶಸ್ವಿಯಾಗಿದ್ದು ಪ್ರಸ್ತುತ ಪರಿಸರ ವಿಮೋಚನಾ ಪತ್ರ ಪಡೆಯುವ ಹಂತದಲ್ಲಿರುತ್ತವೆ ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2021 ರ 31-Z ರಂತೆ 90 ಪಟ್ಟಾ ಜಮೀನುಗಳಲ್ಲಿ 672.12 ಎಕರೆ ವಿಸ್ತೀರ್ಣ ಪ್ರದೇಶಕ್ಕೆ ಮರಳು ಗಣಿಗಾರಿಕೆಗೆ ಪರವಾನಿಗೆಯನ್ನು ಸರ್ಕಾರದಿಂದ ನೀಡಲಾಗಿರುತ್ತದೆ.

ಹೊಸ ಮರಳು ನೀತಿ-2020 ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2021 ರಂತೆ ಸ್ಥಳೀಯ ಕಾಮಗಾರಿಗಳಿಗೆ I, II ಮತ್ತು IIIನೇ ಶ್ರೇಣಿಯ ಹಳ್ಳಗಳ ಪಾತ್ರಗಳಲ್ಲಿ ಲಭ್ಯವಿರುವ ಮರಳು ನಿಕ್ಷೇಪ ಪ್ರದೇಶಗಳಲ್ಲಿ ದೊರೆಯುವ ಮರಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಮೂಲಕ ವಿಲೇವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಒಟ್ಟು 112 ಮರಳು ಬ್ಲಾಕ್ ಗಳನ್ನು ಗುರುತಿಸಿ ಈ ಪೈಕಿ 76 ಮರಳು ಬ್ಲಾಕ್ ಗಳಲ್ಲಿ ಸ್ಥಳೀಯ ಕಾಮಗಾರಿಗಳಿಗೆ ಮರಳು ಪೂರೈಸಲಾಗುತ್ತಿದೆ.

ಕರ್ನಾಟಕ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಗಳಿಂದ ಅನಧಿಕೃತ ಮರಳು ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದ್ದು, ಕಳೆದ 3 ವರ್ಷಗಳಲ್ಲಿ (2024-25 2025-26 ಮತ್ತು 2026-27 ಜುಲೈ ಅಂತ್ಯದವರೆಗೆ) ಅನಧಿಕೃತ ಮರಳು ಗಣಿಗಾರಿಕೆ, ಸಾಗಾಣಿಕೆ ಹಾಗೂ ದಾಸ್ತಾನುರಡಿ ಒಟ್ಟು 4495 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದ್ದು, ಈ ಪೈಕಿ 816 ಪ್ರಕರಣಗಳಿಗೆ ಸಂಬಂಧಪಟ್ಟಂತೆ ನ್ಯಾಯಾಲಯ ಹಾಗೂ ಪೋಲಿಸ್ ಠಾಣೆಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ. ಉಳಿದ ಪ್ರಕರಣಗಳಿಗೆ ಸಂಬಂಧಿಸಿದಂತೆ ರೂ.1498.7 ಲಕ್ಷಗಳ ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದೆ.

**ಸಂಖ್ಯೆ**: ಸಿಐ-ಎಂಎಂಎನ್/333/2025

(signature)

**(ಎಸ್.ಎಸ್. ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.